ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಕೋವಿಡ್-19 (ಕೆ.ಎಲ್.ಎ ಸದಸ್ಯರು)

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ ದಿನಾಂಕ : DATE : 9/7/2020

ಭೋಜೇಗೌಡಗೆ ಸೋಂಕು ದೃಢ, ಸಿ.ಟಿ.ರವಿಗೆ ನೆಗೆಟಿವ್

ಚಿಕ್ಕಮಗಳೂರು: ಸೋಂಕಿತ ವಿಧಾನ ಪರಿಷತ್ ಸದಸ್ಯ ಎಂ.ಕೆ.ಪ್ರಾಣೇಶ್ ಅವರ ಪ್ರಾಥಮಿಕ ಸಂಪರ್ಕದಲ್ಲಿದ್ದ ವಿಧಾನ ಪರಿಷತ್ ಸದಸ್ಯ ಎಸ್.ಎಲ್.ಭೋಜೇಗೌಡಗೆ ಕೊರೋನಾ ಸೋಂಕು ಬುಧವಾರ ದೃಢಪಟ್ಟಿದೆ. ಆದರೆ, ಸಚಿವ ಸಿ.ಟಿ.ರವಿ, ಮಾಜಿ ಶಾಸಕ ಡಿ.ಎನ್. ಜೀವರಾಜ್, ಕಡೂರು ಶಾಸಕ ಬೆಳ್ಳಿ ಪ್ರಕಾಶ್ ವರದಿ ನೆಗೆಟಿವ್ ಬಂದಿದೆ.

ಸೋಂಕಿತ ವಿಧಾನ ಪರಿಷತ್ ಸದಸ್ಯ ಎಂ.ಕೆ.ಪ್ರಾಣೇಶ್ ಅವರ ಪ್ರಾಥಮಿಕ ಸಂಪರ್ಕದಲ್ಲಿದ್ದ ಬಿಜೆಪಿ ಶಾಸಕರು, ಮುಖಂಡರು, ಅಧಿಕಾರಿಗಳ ಗಂಟಲು ದ್ರವವನ್ನು ಮಂಗಳವಾರ ಬೆಂಗಳೂರಿನ ನಿಮ್ಹಾನ್ಸ್ ಆಸ್ಪತ್ರೆ ಪ್ರಯೋಗಾಲಯಕ್ಕೆ ಕಳುಹಿಸಿಕೊಡಲಾಗಿತ್ತು. ಎಸ್.ಎಲ್.ಭೋಜೇಗೌಡ ಹೊರತುಪಡಿಸಿ ಉಳಿದೆಲ್ಲರ ವರದಿಗಳು ನೆಗೆಟಿವ್ ಬಂದಿವೆ. ಇದೇ ವೇಳೆ ಎಂ.ಕೆ. ಪ್ರಾಣೇಶ್ ಅವರು ಆಸ್ಪತ್ರೆಯಿಂದ ಬಿಡುಗಡೆ ಮಾಡಿರುವ ಹೇಳಿಕೆಯಲ್ಲಿ 'ನಾನು ಜುಲೈ 2ರಂದು ಬೆಂಗಳೂರಿಗೆ ತೆರಳಿದ್ದು, ಅಲ್ಲಿ ಯಾರದ್ದೋ ಸಂಪರ್ಕದಿಂದ ಸೋಂಕು ತಗುಲಿದೆ ಎಂದು ತಿಳಿಸಿದರು.